Form No.4 (Civil)
Deposition
Sheets
(R.P.No.57)

# ಒಂದನೇ ಹೆಚ್ಚುವರಿ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರ ನ್ಯಾಯಾಲಯ, ಯಾದಗಿರಿ

## ಎಸ್.ಸಿ. ಸಂಖ್ಯೆ: 32/2020

ಪ್ರಾ.ಸಾ. 12 ಚಾ.ಸಾ 15

| | | |
|---|---|---|
| ಹೆಸರು | : | ಆನಂದ |
| ತಂದೆಯ ಹೆಸರು | : | ಕಾಶಪ್ಪ |
| ವಯಸ್ಸು | : | 35 ವರ್ಷ |
| ಉದ್ಯೋಗ | : | ಗ್ರಾಮ ಪಂಚಾಯತ್ ಸದಸ್ಯರು |
| ವಾಸ | : | ಗೋಪಾಳಪೂರ |

ಪ್ರಮಾಣ ವಚನ ಭೋಧಿಸಿದ ದಿನಾಂಕ: 17-01-2026
ಮುಖ್ಯ ವಿಚಾರಣೆ ಸರಕಾರಿ ಅಭಿಯೋಜಕರಿಂದ

ಚಾಸಾ-16 ಮತ್ತು 28 ರವರ ಪರಿಚಯ ಇರುವುದಿಲ್ಲ. ನನ್ನನ್ನು ಮತ್ತು ಚಾಸಾ-16 ರವರನ್ನು ಕರೆಯಿಸಿ ಪೊಲೀಸರು ನಮ್ಮ ಸಮಕ್ಷಮ ಯಾವುದೇ ಜಪ್ತಿ ಪಂಚನಾಮೆ ಮಾಡಿರುವುದಿಲ್ಲ. ಸುಮಾರು 2-3 ವರ್ಷಗಳ ಹಿಂದೆ ನಾನು ಪೊಲೀಸ ಠಾಣೆಗೆ ಹೋದಾಗ ಪೊಲೀಸರು ಒಂದು ದಾಖಲೆಗೆ ನನ್ನ ಸಹಿ ಪಡೆದುಕೊಂಡಿರುತ್ತಾರೆ. ಸದರಿ ದಾಖಲೆಯನ್ನು ಸಾಕ್ಷಿಯು ನೋಡಿ ಗುರುತಿಸಿದ್ದು ಅದನ್ನು **ನಿ.ಪಿ.39** ಎಂದು ಸಾಕ್ಷಿದಾರರ ಸಹಿಯನ್ನು **ನಿ,ಪಿ.39(ಎ)** ಎಂದು ಗುರುತಿಸಲಾಯಿತು. ನಿ.ಪಿ.39 ರಲ್ಲಿ ಬರೆದ ವಿಷಯ ನನಗೆ ಗೊತ್ತಿರುವುದಿಲ್ಲ.

(**ಈ ಸಂದರ್ಭದಲ್ಲಿ ಮಾನ್ಯ ಪಿಪಿರವರು ಈ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯೆಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿ ನೀಡಬೇಕೆಂದು ಕೋರಿರುತ್ತಾರೆ, ಅನುಮತಿ ನೀಡಲಾಗಿದೆ.**)

**ಪಾಟೀ ಸವಾಲು: ಮಾನ್ಯ ಸರ್ಕಾರಿ ಅಭಿಯೋಜಕರವರಿಂದ:**

2. ದಿ: 24.02.2019 ರಂದು ರಾತ್ರಿ 8.00 ಗಂಟೆಗೆ ನನ್ನನ್ನು ಹಾಗೂ ಚಾಸಾ-16 ರವರನ್ನು ಗುರುಮಠಕಲ್ ಪೊಲೀಸ ಠಾಣೆಗೆ ಕರೆಯಿಸಿದ್ದರು

ಎಂದರೆ ಸರಿಯಲ್ಲ. ಆ ಸಮಯದಲ್ಲಿ ಚಾಸಾ-28 ರವರು ಮೃತನ ಮೈಮೇಲೆ ಇದ್ದ ಬಟ್ಟೆ ಹಾಗೂ ಮುದ್ದೆ ಮಾಲುಗಳನ್ನು ತಂದು ಹಾಜರುಪಡಿಸಿದ್ದು, ನಮ್ಮ ಸಮಕ್ಷಮ ರಾತ್ರಿ 8.00-9.00 ಗಂಟೆಯವರೆಗೆ ಜಪ್ತಿ ಪಂಚನಾಮೆ ಮಾಡಿ, ಪಂಚನಾಮೆ ಬರೆದು ಓದಿ ಹೇಳಿದ ಮೇರೆಗೆ ನಿ.ಪಿ.39 ಕ್ಕೆ ಸಹಿ ಮಾಡಿರುತ್ತೇನೆ ಎಂದರೆ ಸರಿಯಲ್ಲ.

3. ನನಗೆ ಎಲ್ಲಾ ವಿಷಯಗೊತ್ತಿದ್ದರು ಸಹ ಆರೋಪಿತರಿಗೆ ಸಹಾಯ ಮಾಡಲು ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

<u>ಪಾಟೀ ಸವಾಲು 1 ನೇ ಆರೋಪಿಯ ಪರವಾಗಿ ಶ್ರೀ. ಎಮ್.ಎಮ್.ಇ ವಕೀಲರಿಂದ</u>

- ಪಾಟೀ ಸವಾಲ ಇಲ್ಲವೆಂದು ನುಡಿಯುತ್ತಾರೆ

<u>ಪಾಟೀ ಸವಾಲು 2 ನೇ ಆರೋಪಿಯ ಪರವಾಗಿ ಶ್ರೀ. ಬಿ.ಬಿ.ಕೆ ವಕೀಲರಿಂದ</u>

- ಪಾಟೀ ಸವಾಲ ಇಲ್ಲವೆಂದು ನುಡಿಯುತ್ತಾರೆ.

<u>ಮರುವಿಚಾರಣೆಃ-ಇಲ್ಲ</u>

(ನನ್ನ ಉಕ್ತ ಲೇಖನದ ಮೇರೆಗೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಿಸಿದೆ)

ಓ.ಹೇ.ಕೆ.ಸ. ಇದೆ.

ಒಂದನೇ ಹೆಚ್ಚುವರಿ ಜಿಲ್ಲಾ ಮತ್ತು ಸತ್ರ
ನ್ಯಾಯಾಧೀಶರು, ಯಾದಗಿರಿ.